ಖಾಲಿ ಹುದ್ದೆಗಳ ಭರ್ತಿ

880 (877); ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ)

ಅ) ರಾಜ್ಯದಲ್ಲಿರುವ ತಾಲ್ಲೂಕು ಕಚೇರಿಗಳಲ್ಲಿ ಶಿರಸ್ತೇದಾರರು, ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು ಹಾಗೂ ಇತರೆ ವರ್ಗದ ಹಲವಾರು ಹುದ್ದೆಗಳ ಖಾಲಿಯಿರುವುದರಿಂದ, ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಖಾಲಿಯಿರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು

ಶ್ರೀ ವಿ. ಶ್ರೀನಿವಾಸ್ ಪ್ರಸಾದ್ (ಕಂದಾಯ ಸಚಿವರು)

ಅ) ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಹುದ್ದೆಗಳು ಖಾಲಿಯಿದ್ದಾಗ್ಯೂ ಪ್ರಭಾರ ವ್ಯವಸ್ಥೆಯ ಮೇಲೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಸೇವೆಗಳನ್ನು ತೆಗೆದುಕೊಂಡು ಜನಸಾಮಾನ್ಯರಿಗೆ ತೊಂದರೆಯಾಗದ ರೀತಿಯಲ್ಲಿ ಕೆಲಸ ನಿರ್ವಹಿಸಿಕೊಂಡು ಹೋಗಲಾಗುತ್ತಿದೆ.

ಆ)

- ಶಿರಸ್ತೇದಾರ್ ಹುದ್ದೆಗಳು ಶೇ.100 ರಷ್ಟು ಪದೋನ್ನತಿಯಿಂದ ಭರ್ತಿ ಮಾಡಬೇಕಾದ ಹುದ್ದೆಗಳಾಗಿದ್ದು, ಪ್ರ.ದ.ಸ/ಪ್ರ.ದ.ರಾ.ನಿ ಮತ್ತು ಶೀಘ್ರಲಿಪಿಗಾರರ ವೃಂದದಲ್ಲಿ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿದ ನೌಕರರನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಪ್ರ.ದ.ಸ/ಪ್ರ.ದ.ರಾ.ನಿ ಹುದ್ದೆಗಳನ್ನು ಶೇ.30 ರಷ್ಟು ನೇರ ನೇಮಕಾತಿ ಮೂಲಕ ಮತ್ತು ಶೇ.70 ರಷ್ಟು ದ್ವಿ.ದ.ಸ/ಗ್ರಾ.ಲೆ.ನೌಕರರ

ಪದೋನ್ನತಿಯಿಂದ (30:40 ರ ಅನುಪಾತದಂತೆ) ಭರ್ತಿ ಮಾಡಬೇಕಾಗಿದ್ದು, ದ್ವಿ.ದ.ಸ. ಹುದ್ದೆಗಳನ್ನು ಶೇ.90 ರಷ್ಟು ನೇರ ನೇಮಕಾತಿ ಮೂಲಕ ಮತ್ತು ಶೇ.10 ರಷ್ಟು ಗ್ರೂಪ್ ಡಿ ನೌಕರರ ಪದೋನ್ನತಿಯಿಂದ ಭರ್ತಿ ಮಾಡಬೇಕಾಗಿರುತ್ತದೆ ಹಾಗೂ ಶೀಘ್ರಲಿಪಿಗಾರರು/ಬೆರಳಚ್ಚುಗಾರರ ವೃಂದದಲ್ಲಿ ಖಾಲಿಯಿರುವ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಆಯ್ಕೆ ಮಾಡಿಕೊಳ್ಳುವ ಕುರಿತು ಕ್ರಮ ವಹಿಸಲಾಗುತ್ತಿದೆ. ಉಳಿದಂತೆ ಪದೋನ್ನತಿಗೆ ಮೀಸಲಿಟ್ಟ ಹುದ್ದೆಗಳ ಬಗ್ಗೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳೇ ಪದೋನ್ನತಿ ನೀಡಲು ಸಕ್ಷಮ ಪ್ರಾಧಿಕಾರಿಗಳಾಗಿರುವುದರಿಂದ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ.

- ಕರ್ನಾಟಕ ನಾಗರೀಕ ಸೇವಾ ನಿಯಮಗಳು (ಕಂದಾಯ ಅಧೀನ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 1977 (ತಿದ್ದುಪಡಿ ನಿಯಮಾವಳಿ, 2008) ರನ್ವಯ ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳು ಶೇ.100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿದ್ದು, ಸದರಿ ಹುದ್ದೆಗಳಿಗೆ ಆಯ್ಕೆ ಪ್ರಾಧಿಕಾರದ ಅಧ್ಯಕ್ಷರು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಆಗಿದ್ದು, ಪ್ರಸ್ತುತ ಖಾಲಿ ಇರುವ ಗ್ರಾ.ಲೆ. ಹುದ್ದೆಗಳನ್ನು ಭರ್ತಿ ಮಾಡಲು ಆಯಾ ಜಿಲ್ಲೆಗಳಲ್ಲಿ ಆಯ್ಕೆ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ, ಹಾಗೂ ವಾಹನ ಚಾಲಕರು ಮತ್ತು ಗ್ರೂಪ್ ಡಿ ಹುದ್ದೆಗಳನ್ನು ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 137 ಈಕಾಅ 2005 ದಿ:26/7/2005 ರನ್ವಯ ಬಾಹ್ಯ ಮೂಲಗಳ ಮುಖಾಂತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.